## 20. ಸಂಸತ್ ಅಧಿವೇಶನ ಮೊಟಕು

ಕೊರೋನಾ ವೈರಸ್ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಂಸತ್ ಮುಂಗಾರು ಅಧಿವೇಶನವನ್ನು ಮೊಟಕುಗೊಳಿಸುವಂತೆ ಸಂಸದೀಯ ವ್ಯವಹಾರಗಳ ಸಲಹಾ ಸಮಿತಿಯಲ್ಲಿ ನಿರ್ಣಯ ಕೈಗೊಳ್ಳಲಾಗಿದ್ದು, ಪ್ರಸ್ತಾವನೆಯನ್ನು ಲೋಕಸಭೆಯ ಸ್ಪೀಕರ್ ಓಂ ಬಿರ್ಲಾಗೆ ಕಳುಹಿಸಲಾಗಿರುತ್ತದೆ.

ಸೆಪ್ಟೆಂಬರ್ 14ರಂದು ಆರಂಭವಾಗಿರುವ ಅಧಿವೇಶನ ಅಕ್ಟೋಬರ್ 1ರವರೆಗೆ ನಿಗದಿಯಾಗಿದ್ದು, ಮುನ್ನೆಚ್ಚರಿಕೆ ಕ್ರಮಗಳನ್ನು ನಡೆಸಲಾಗುತ್ತಿದ್ದರೂ, ಸಂಸದರಿಗೆ ಕೊರೋನಾ ಸೋಂಕು ಕಂಡುಬರುತ್ತಿದೆ. ಅವರ ಆರೋಗ್ಯ ದೃಷ್ಟಿಯಿಂದ ಕಲಾಪವನ್ನು ಅವಧಿಗೂ ಮುನ್ನ ಮುಕ್ತಾಯಗೊಳಿಸುವುದು ಸೂಕ್ತ ಎಂದು ಸಮಿತಿಯ ಬಹುತೇಕ ಸದಸ್ಯರು ಅಭಿಪ್ರಾಯಪಟ್ಟಿದ್ದಾರೆ.

**ಸಂಸತ್‌ನಲ್ಲಿ ಸರ್ಕಾರ ಹೇಳಿದ್ದು:**

- ಮಿಲಿಟರಿ ಕ್ಯಾಂಟೀನ್‌ಗಳಲ್ಲಿ ಕೇವಲ ಮೇಡ್ ಇನ್ ಇಂಡಿಯಾ ವಸ್ತುಗಳನ್ನು ಮಾರಾಟ ಮಾಡುವ ಬಗ್ಗೆ ನಿರ್ಧಾರ ಕೈಗೊಂಡಿಲ್ಲ.
- ಡಿಆರ್‌ಡಿಓ 8 ಅತ್ಯಾಧುನಿಕ ತಂತ್ರಜ್ಞಾನ ಕೇಂದ್ರಗಳನ್ನು ದೇಶಾದ್ಯಂತ ಸ್ಥಾಪಿಸಿದ್ದು, ರಕ್ಷಣೆಗೆ ಸಂಬಂಧಿಸಿದ ಸಂಶೋಧನೆ ನಡೆಯುತ್ತಿದೆ.
- ರೂ.2 ಸಾವಿರ ನೋಟುಗಳನ್ನು ಚಲಾವಣೆಯಿಂದ ಹಿಂದೆ ಪಡೆಯುವ ಯಾವುದೇ ಪ್ರಸ್ತಾವನೆ ಇಲ್ಲ
- ಏಪ್ರಿಲ್‌ನಿಂದ ಆಗಸ್ಟ್‌ವರೆಗೆ ನೇರ ತೆರಿಗೆ ಸಂಗ್ರಹದಲ್ಲಿ ಶೇ.31 ಕುಸಿತ ಮತ್ತು ಪರೋಕ್ಷ ತೆರಿಗೆ ಶೇ.11 ಹಿನ್ನಡೆ.

**ಹಿಂದಿ ಹೇರಿಕೆ ಸಲ್ಲದು:** ಪ್ರಾದೇಶಿಕ ಭಾಷೆಗಳ ಮೇಲೆ ಹಿಂದಿ ಹೇರುವುದನ್ನು ಖಂಡಿತಾ ವಿರೋಧಿಸುತ್ತೇನೆ ಎಂದು ಸಂಸದೆ ಸುಮಲತಾ ಅವರು ಹೇಳಿದ್ದಾರೆ. ಶೂನ್ಯ ವೇಳೆಯ ಕಲಾಪದಲ್ಲಿ ಮಾತನಾಡಿದ ಅವರು, ಭಾಷಾ ಹೇರಿಕೆಯಿಂದ ಕೇಂದ್ರ ಸರ್ಕಾರದ ಯೋಜನೆಗಳ ಅನುಷ್ಠಾನದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಹಿಂದಿ ಹೇರಿಕೆ ಮೂಲಕ ಕನ್ನಡವನ್ನು ಮೂಲೆಗುಂಪು ಮಾಡುವುದು ಭಾವನೆಗೆ ಘಾಸಿಯುಂಟು ಮಾಡುತ್ತದೆ. ಕೇಂದ್ರ ಸರ್ಕಾರದ ತ್ರಿಭಾಷಾ ಸೂತ್ರ ಸ್ಥಳೀಯ ಭಾಷೆಯ ಮೇಲೆ ಹಿಂದಿ ಹೇರುವುದೇ ಆಗಿದೆ ಎಂಬ ಅಭಿಪ್ರಾಯ ಬಲಗೊಳ್ಳುತ್ತಿದೆ. ಕೇಂದ್ರವು ವಿವಿಧತೆಯಲ್ಲಿ ಏಕತೆಯ ತತ್ವವನ್ನು ಮರೆಯಬಾರದು ಎಂದಿದ್ದಾರೆ.

ಆಧಾರ:ವಿಜಯವಾಣಿ, ದಿನಾಂಕ:20.09.2020